Fax : 08192 - 208444
Telephone : 08192 - 208309

website : davangereuniversity.ac.in
e-mail : cdcdu2013@gmail.com

# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ – 577 007.

**ಕಾಲೇಜು ಅಭಿವೃದ್ಧಿ ಪರಿಷತ್**

ಸಂ:ದಾವಿವಿ/ಸಿಡಿಸಿ/ಸಂಯೋ–413/2021–22/1992 ದಿನಾಂಕ:25.09.2021

## ಪರಿಷ್ಕೃತ ಪ್ರಕಟಣೆ

ವಿಷಯ : ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ 2021–22ನೇ ಶೈಕ್ಷಣಿಕ ಸಾಲಿನ ಹೊಸ ಕಾಲೇಜು/ ಕೋರ್ಸುಗಳನ್ನು ಪ್ರಾರಂಭಿಸಲು ಸಂಯೋಜನಾ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ :
1. ಸರ್ಕಾರದ ಆದೇಶ ಸಂಖ್ಯೆ: ಇಡಿ 34 ಇಜಿಒವಿ2020(ಭಾಗ 2), ದಿನಾಂಕ:10.06.2021.
2. ಸಂ.ದಾವಿವಿ/ಸಿಡಿಸಿ/ಸಂಯೋ–413/2021–22/484, ದಿನಾಂಕ.21.06.2021.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಯುಎನ್ಇ 2020, ದಿನಾಂಕ:03.08.2021.
4. ಸಂ:ದಾವಿವಿ/ಸಿಡಿಸಿ/ಸಂಯೋ–413/2021–22/1673, ದಿನಾಂಕ:03.09.2021.
5. ಮಾನ್ಯ ಕುಲಪತಿಗಳವರ ಅನುಮೋದನೆ ದಿನಾಂಕ:25.09.2021.

ವಿಶ್ವವಿದ್ಯಾನಿಲಯದ ವ್ಯಾಪ್ತಿಯ ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಹೊಸ ಪದವಿ ಕಾಲೇಜುಗಳನ್ನು 2021–22ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ರಾಜ್ಯ ಸರ್ಕಾರದ / ವಿಶ್ವವಿದ್ಯಾನಿಲಯದ ಅನುದಾನದ ಅಪೇಕ್ಷೆ ಇಲ್ಲದೆ ಕಾಲೇಜುಗಳನ್ನು ನಡೆಸಲು ಆರ್ಥಿಕ ಸಾಮರ್ಥ್ಯವುಳ್ಳ ನೊಂದಾಯಿತ ಸೊಸೈಟಿ/ಸಾರ್ವಜನಿಕ ಟ್ರಸ್ಟ್/ಸಂಸ್ಥೆಗಳು ದಿನಾಂಕ:13.09.2021ರವರೆಗೆ ನವೀನ ಸಂಯೋಜನೆಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಉಲ್ಲೇಖ (2) ಮತ್ತು (4)ರಲ್ಲಿ ಪ್ರಕಟಣೆಯನ್ನು ಹೊರಡಿಸಲಾಗಿತ್ತು.

ತತ್ಸಬಂಧವಾಗಿ, ರಾಜ್ಯದಲ್ಲಿ 10+02 ಅಥವಾ ಪಿ.ಯು.ಸಿ. ಅಥವಾ ತತ್ಸಮಾನ ಕೋರ್ಸುಗಳ ಫಲಿತಾಂಶ ಪ್ರಕಟಣೆಯಾಗಿದ್ದು ವಿವಿಧ ಪದವಿ ಕೋರ್ಸುಗಳ ಪ್ರವೇಶಾತಿಗೆ ವಿದ್ಯಾರ್ಥಿಗಳ ಬೇಡಿಕೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಮತ್ತು ವಿವಿಧ ಶಿಕ್ಷಣ ಸಂಸ್ಥೆಗಳು/ಹೊಸ ಕಾಲೇಜುಗಳು/ಕೋರ್ಸಗಳನ್ನು ಪ್ರಾರಂಭಿಸುವ ಸಂಬಂಧ ಅರ್ಜಿಗಳನ್ನು ಸಲ್ಲಿಸಿರುವುದನ್ನು ಪರಿಗಣಿಸಿ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳ ವ್ಯಾಪ್ತಿಯಲ್ಲಿ ಹೊಸ ಪದವಿ ಕಾಲೇಜು / ಹೊಸ ಪದವಿ ಕೋರ್ಸುಗಳನ್ನು 2021–22ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ರಾಜ್ಯ ಸರ್ಕಾರದ / ವಿಶ್ವವಿದ್ಯಾನಿಲಯದ ಅನುದಾನದ ಅಪೇಕ್ಷೆ ಇಲ್ಲದೆ ಕಾಲೇಜುಗಳನ್ನು ನಡೆಸಲು ಆರ್ಥಿಕ ಸಾಮರ್ಥ್ಯವುಳ್ಳ ನೊಂದಾಯಿತ ಸೊಸೈಟಿ/ಸಾರ್ವಜನಿಕ ಟ್ರಸ್ಟ್/ಸಂಸ್ಥೆಗಳು ನವೀನ ಪದವಿ ಕಾಲೇಜುಗಳನ್ನು ಪ್ರಾರಂಭಿಸಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆಗಳಿಗೆ **ದಿನಾಂಕ:30.09.2021ರವರೆಗೆ** ವಿಸ್ತರಿಸಲಾಗಿದೆ.

ನಿಗದಿತ ಸಂಯೋಜನ ಶುಲ್ಕಗಳನ್ನು ವಿಶ್ವವಿದ್ಯಾನಿಲಯಕ್ಕೆ ಜಮೆ ಮಾಡಿದ ಬ್ಯಾಂಕ್ ಚಲನ್ ಪ್ರತಿಯೊಂದಿಗೆ ಭರ್ತಿ ಮಾಡಿದ ಆನ್‌ಲೈನ್ ಅರ್ಜಿಗಳನ್ನು ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ–577007 ಇವರ ಕಛೇರಿಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆಯ ಮೂಲಕ ನಿಗಧಿತ ದಿನಾಂಕದೊಳಗೆ ಸಲ್ಲಿಸತಕ್ಕದ್ದು. ಅಂಚೆ ವಿಳಂಬಕ್ಕೆ ವಿಶ್ವವಿದ್ಯಾನಿಲಯ ಜವಾಬ್ದಾರಿಯಾಗಿರುವುದಿಲ್ಲ. ಮೇಲ್ಕಂಡ ದಿನಾಂಕಗಳ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

**ಸಂಯೋಜನೆ ಅರ್ಜಿ ಶುಲ್ಕ/ ಸಂಯೋಜನಾ ಶುಲ್ಕಗಳಿಗೆ ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಹೆಚ್ಚಿನ ವಿವರಗಳಿಗೆ ವಿಶ್ವವಿದ್ಯಾನಿಲಯದ ವೆಬ್‌ಸೈಟ್ http://davangereuniversity.ac.in ಅನ್ನು ನೋಡಬಹುದು.**

**ಅರ್ಜಿ ಸಲ್ಲಿಸಲು https://www.onlineaffiliation.karnataka.gov.in/Affiliation2122/ ಈ ವಿಳಾಸವನ್ನು ಸಂಪರ್ಕಿಸುವುದು.**

ಆದೇಶದ ಮೇರೆಗೆ,

25/9/2021.

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577007